ಈ) ತೀರ್ಥಹಳ್ಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ 4 ಹೊಸ (ಮೇಗರವಳ್ಳಿ ಗ್ರಾಮದ ಕುಡಿಯುವ ನೀರಿನ ಯೋಜನೆ ರೂ.72.00 ಲಕ್ಷ, ಬಸವಾನಿ ಗ್ರಾಮದ ಕುಡಿಯುವ ನೀರಿನ ಯೋಜನೆ ರೂ.100.00 ಲಕ್ಷ, ಹಾರೋಗುಳಿಗೆ ಪಂಚಾಯತ್ ವ್ಯಾಪ್ತಿಯ 6 ಗ್ರಾಮಗಳ ಕುಡಿಯುವ ನೀರಿನ ಯೋಜನೆ ರೂ. 118.00 ಲಕ್ಷ, ಮಂಡಗದ್ದೆ ಹಾಗೂ ಇತರೆ ಗ್ರಾಮಗಳ ಕುಡಿಯುವ ನೀರಿನ ಸರಬರಾಜು ಯೋಜನೆ ರೂ.376.80 ಲಕ್ಷ) ಸಂಯುಕ್ತ ಕುಡಿಯುವ ನೀರಿನ ಯೋಜನೆಗಳನ್ನು 2009–10ರ ಸಾಲಿನಲ್ಲಿ ಅನುಷ್ಠಾನಗೊಳಿಸಲು ತಯಾರಿಸಿರುವ ಅಂದಾಜು ಪಟ್ಟಿಗಳು ಪರಿಶೀಲನೆಯಲ್ಲಿವೆ.

795 ಶ್ರೀ ಸುರೇಶ್ ಗೌಡ (ನಾಗಮಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಿಗೆ ರಾಜೀವ್ ಗಾಂಧಿ ಸಬ್–ಮಿಷನ್ ಯೋಜನೆಯಡಿ ಕುಡಿಯುವ ನೀರು ಒದಗಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು(ವಿವರ ಒದಗಿಸುವುದು);

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು):

ಅ) ಮತ್ತು ಆ) ನಾಗಮಂಗಲ ತಾಲ್ಲೂಕಿನ 166 ಗ್ರಾಮಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ರೂ.56.13 ಕೋಟಿ ಅಂದಾಜಿನ ಬೃಹತ್ ಯೋಜನೆ ಸಿದ್ಧಪಡಿಸಿ, ದಿನಾಂಕ: 18/12/2007ರ ರಾಜ್ಯಮಟ್ಟದ ಎಂಪವರ್ಡ್ ಸಮಿತಿ ಸಭೆಯ ಅನುಮೋದನೆಗಾಗಿ ಮಂಡಿಸಲಾಗಿತ್ತು. ಆದರೆ, ಸದರಿ ಯೋಜನೆಯಡಿ ತಲಾ ವೆಚ್ಚ ರೂ.7,878/– ಆಗುವುದರಿಂದ ಮತ್ತು ಈಗಾಗಲೇ ಸದರಿ ಜನವಸತಿಗಳಲ್ಲಿ ಇತರೆ ಕುಡಿಯುವ ನೀರಿನ ಸಂಪನ್ಮೂಲಗಳಿರುವುದರಿಂದ, ಸದ್ಯಕ್ಕೆ ಆರ್ಥಿಕವಾಗಿ ಕಾರ್ಯಸಿಂಧುತ್ವ ವಿಲ್ಲದಿರುವ ಈ ಯೋಜನೆ ಪ್ರಸ್ತಾಪವನ್ನು ಕೈಬಿಡಲು ತೀರ್ಮಾನಿಸಲಾಗಿದೆ.

1002 ಶ್ರೀ ಮಹೇಶ್ ಎಸ್.ಆರ್. : ಮಾನ್ಯ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮತ್ತೆ ಲಾಟರಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಈ ಹಿಂದೆ ಈ ಯೋಜನೆಯನ್ನು ಸ್ಥಗಿತಗೊಳಿಸಲು ಇದ್ದ ಕಾರಣಗಳೇನು?

ಇ) ಈಗ ಮತ್ತೆ ಲಾಟರಿ ಪ್ರಾರಂಭಿಸುವುದರಿಂದ ಬಡ ಸಾರ್ವಜನಿಕರ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೇ?

ಈ) ಹಾಗಿದ್ದಲ್ಲಿ, ಈ ಯೋಜನೆಯನ್ನು ಸರ್ಕಾರ ಪ್ರಾರಂಭಿಸಲು ಮುಂದಾಗಿರಲು ಕಾರಣಗಳೇನು?

ಶ್ರೀ ಕೆ.ಶಿವನಗೌಡ ನಾಯಕ್ (ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) :

ಅ) ಇಲ್ಲ.

ಆ) ಸಮಾಜದ ಮತ್ತು ಬಡಜನರ ಮೇಲಾಗುತ್ತಿದ್ದ ಪ್ರತಿಕೂಲ ಪರಿಣಾಮದ ಹಿನ್ನೆಲೆಯಲ್ಲಿ ಸರ್ಕಾರವು ಅಧಿಸೂಚನೆ ಸಂಖ್ಯೆ: ಆಇ 22 ಸಉಲಾ 2006, ದಿನಾಂಕ: 27–3–2007ರಲ್ಲಿ ದಿನಾಂಕ: 01–4–2007 ರಿಂದ ಜಾರಿಗೆ ಬರುವಂತೆ ರಾಜ್ಯದಲ್ಲಿ ಎಲ್ಲಾ ತರಹದ ಲಾಟರಿ ಮಾರಾಟವನ್ನು ನಿಷೇಧಿಸುವುದರೊಂದಿಗೆ ರಾಜ್ಯವನ್ನು ಲಾಟರಿ ಮುಕ್ತ ವಲಯವೆಂದು ಘೋಷಿಸಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

875 ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್, ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕಿನಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳೆಷ್ಟು (ವಿವರ ನೀಡುವುದು);

ಆ) ಇದ್ದಲ್ಲಿ, ಶಾಶ್ವತ ಕುಡಿಯುವ ನೀರಿನ ಪೂರೈಕೆಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ;

ಇ) ಈ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿಗಾಗಿ ಯಗಚಿ ಜಲಾಶಯದಿಂದ ನೀರನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು)?